# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 27

ಸದಸ್ಯರ ಹೆಸರು : ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು)

ಉತ್ತರಿಸುವವರು : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.

ಉತ್ತರಿಸಬೇಕಾದ ದಿನಾಂಕ : 29/01/2021

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರಗಳ ವತಿಯಿಂದ ತಾಯಿಯ ಮಡಿಲಿನಿಂದ – ತೊಟ್ಟಿಲವರೆಗೆ ಎಂಬ ತಾಯಿ–ಮಗು ಹಾರೈಕೆಯ ಯೋಜನೆಗಳು ಯಾವುವು; (ಸಂಪೂರ್ಣ ಮಾಹಿತಿ ನೀಡುವುದು.) | ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರವು ಮಹಿಳೆಯರು ಮತ್ತು ಮಕ್ಕಳ ಸಮಗ್ರ ಅಭಿವೃದ್ಧಿಗಾಗಿ ಹಾಗೂ ಅಪೌಷ್ಠಿಕತೆಯನ್ನು ನಿವಾರಿಸಲು ಅನುಷ್ಠಾನಗೊಳಿಸಲಾಗಿರುವ ಯೋಜನೆಗಳು ಈ ಕೆಳಕಂಡಂತಿದೆ.<br>• ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿ ಸಾಮಾನ್ಯ ಮಕ್ಕಳಿಗೆ ಪ್ರತಿದಿನ ರೂ.8/–ರಂತೆ ಘಟಕ ವೆಚ್ಚ ಭರಿಸುತ್ತಿದ್ದು, ತೀವ್ರ ಅಪೌಷ್ಠಿಕತೆಯುಳ್ಳ ಮಕ್ಕಳಿಗೆ ರೂ.12/– ರ ಪೂರಕ ಪೌಷ್ಠಿಕ ಆಹಾರವನ್ನು ನೀಡಲಾಗುತ್ತಿದೆ.<br>• 3 ರಿಂದ 6 ವರ್ಷದ ಎಲ್ಲಾ ಮಕ್ಕಳಿಗೆ ವಾರದಲ್ಲಿ 2 ದಿನ ಮೊಟ್ಟೆ ನೀಡಲಾಗುತ್ತಿದೆ.<br>• 6 ತಿಂಗಳಿನಿಂದ 6 ವರ್ಷದ ಮಕ್ಕಳಿಗೆ ವಾರದಲ್ಲಿ 5 ದಿನ 150 ಎಂ.ಎಲ್. ಕೆನೆಭರಿತ ಹಾಲು ನೀಡಲಾಗುತ್ತಿದೆ<br>• ಅತಿ ಕಡಿಮೆ ತೂಕವುಳ್ಳ ಮಕ್ಕಳಿಗೆ ವಾರದಲ್ಲಿ 3 ದಿನ ಮೊಟ್ಟೆ ಹಾಗೂ 200 ಎಂ.ಎಲ್. ಹಾಲು ಹಾಗೂ ಮೊಟ್ಟೆ ಉಪಯೋಗಿಸದ ಮಕ್ಕಳಿಗೆ ವಾರದಲ್ಲಿ 200 ಎಂ.ಎಲ್. ಹಾಲು ನೀಡಲಾಗುತ್ತಿದೆ<br>• ಹಿಂದುಳಿದ ಜಿಲ್ಲೆಗಳಾದ ಬೀದರ್, ಕಲಬುರ್ಗಿ, ಯಾದಗಿರಿ, ಕೊಪ್ಪಳ ಹಾಗೂ ರಾಯಚೂರಿನ ಸಾಧಾರಣ ಅಪೌಷ್ಠಿಕ ಮಕ್ಕಳಿಗೆ ವಾರದಲ್ಲಿ 3 ದಿನ ಮೊಟ್ಟೆ ಹಾಗೂ 3 ದಿನ 200 ಎಂ.ಎಲ್. ಕೆನೆಭರಿತ ಹಾಲನ್ನು ನೀಡಲಾಗುತ್ತಿದೆ.<br>• ಗರ್ಭಿಣಿಯರಿಗೆ ಮತ್ತು ಬಾಣಂತಿಯರಿಗೆ ಅಂಗನವಾಡಿ ಕೇಂದ್ರಗಳಲ್ಲಿ ಮಧ್ಯಾಹ್ನದ ಬಿಸಿಯೂಟ ನೀಡುವ ಮಾತೃಪೂರ್ಣ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ.<br>• ಗರ್ಭಿಣಿ ಮತ್ತು ಬಾಣಂತಿಯರಿಗೆ ಪೂರಕ ಪೌಷ್ಠಿಕ ಅಹಾರಗಳಾದ ಹಣ್ಣು ತರಕಾರಿ ಇನ್ನಿತರ ಪೌಷ್ಠಿಕ ಆಹಾರ ಸೇವನೆಯ ಉದ್ದೇಶಕ್ಕಾಗಿ ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆಯಡಿಯಲ್ಲಿ ರೂ.5000/– ವನ್ನು ನೀಡುವ ಯೋಜನೆ ಜಾರಿಗೊಳಿಸಲಾಗಿದೆ.<br>• ಉದ್ಯೋಗಸ್ಥ ತಾಯಂದಿರ ಮಕ್ಕಳನ್ನು ದಿನಪೂರ್ತಿ ಶಿಶುಪಾಲನಾ ಕೇಂದ್ರದಲ್ಲಿ ಸುರಕ್ಷಿತವಾಗಿ ನೋಡಿಕೊಂಡು ಮಕ್ಕಳ ಪೌಷ್ಠಿಕ ಹಾಗೂ ಆರೋಗ್ಯ ಗುಣಮಟ್ಟ ಸುಧಾರಿಸಲು ರಾಷ್ಟ್ರೀಯ ಶಿಶುಪಾಲನಾ ಕೇಂದ್ರ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ. |

| | | |
|---|---|---|
| | | • ವಿವಿಧ ಇಲಾಖೆಯಗಳ ಸಮನ್ವಯತೆಯೊಂದಿಗೆ ಅಪೌಷ್ಟಿಕತೆ ತಡೆಗಟ್ಟಲು ಕೇಂದ್ರ ಮತ್ತು ರಾಜ್ಯ ಸಹಭಾಗಿತ್ವದಲ್ಲಿ ಪೋಷಣ್ ಅಭಿಯಾನ ಯೋಜನೆಯನ್ನು ಜಾರಿಗೊಳಿಸಲಾಗುತ್ತಿದೆ. ಅಪೌಷ್ಟಿಕತೆಗೆ ಸಾಮಾಜಿಕ, ಶೈಕ್ಷಣಿಕ, ಕೌಟುಂಬಿಕ, ಅನುವಂಶಿಕ ಇನ್ನಿತರ ಕಾರಣಗಳು ಸಹ ಇರಬಹುದಾಗಿದ್ದು ಈ ನಿಟ್ಟಿನಲ್ಲಿ ಕುಟುಂಬದ ಎಲ್ಲಾ ಸದಸ್ಯರಿಗೂ / ಸಮುದಾಯದವರಿಗೂ ಸಹ ಅಪೌಷ್ಟಿಕತೆ ಕುರಿತಂತೆ ಮತ್ತು ನಿವಾರಣಾ ಮಾರ್ಗೋಪಾಯಗಳ ಕುರಿತಂತೆ ತಿಳುವಳಿಕೆ ನೀಡಲು ಪೋಷಣ್ ಅಬಿಯಾನ ಯೋಜನೆಯಡಿಯಲ್ಲಿ ಸಮುದಾಯ ಆಧಾರಿತ ಚಟುವಟಿಕೆಗಳನ್ನು / ಜನಾಂದೋಲನ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ.<br>• ತೀವ್ರ ಅಪೌಷ್ಟಿಕ ಮಕ್ಕಳ ವೈದ್ಯಕೀಯ ವೆಚ್ಚ ಯೋಜನೆಯಡಿ ಔಷಧಿ ಹಾಗೂ ಚಿಕಿತ್ಸಾ ಆಹಾರಕ್ಕಾಗಿ (Therapeutic food) ಪ್ರತಿ ಮಗುವಿಗೆ ವಾರ್ಷಿಕ ರೂ.2000/-ಗಳಂತೆ ವೆಚ್ಚ ಭರಿಸಲಾಗುತ್ತಿದೆ.<br>• ಆರೋಗ್ಯ ಇಲಾಖೆಯ ಸಹಯೋಗದೊಂದಿಗೆ ಪೌಷ್ಟಿಕ ಪುನರ್ವಸತಿ ಕೇಂದ್ರ (NRC) ಗಳಲ್ಲಿ ಅಪೌಷ್ಟಿಕ ಮಕ್ಕಳಿಗೆ ಚಿಕಿತ್ಸೆ ನೀಡಲಾಗುತ್ತಿದೆ. |
| ಆ. | ಕಳೆದ 3 ವರ್ಷಗಳಿಂದ ಈ ಯೋಜನೆಗಳನ್ನು ಅನುಷ್ಠಾನಗೊಳಿಸಲು ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ದೊರೆತಿರುವ ಅನುದಾನವೆಷ್ಟು; ಈ ಅನುದಾನವನ್ನು ಯಾವ ರೀತಿಯಲ್ಲಿ ಸದುಪಯೋಗ ಮಾಡಿಕೊಳ್ಳಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು.) | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿ ಅಂಗನವಾಡಿ ಫಲಾನುಭವಿಗಳಿಗೆ ಒದಗಿಸಲಾಗುವ ಯೋಜನೆಗಳನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಹಭಾಗಿತ್ವದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ.<br>ಕಳೆದ 3 ವರ್ಷಗಳಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಅನುದಾನದ ಮಾಹಿತಿಯನ್ನು ಅನುಬಂಧದಲ್ಲಿ ಒದಗಿಸಿದೆ. |
| ಇ. | ಇತ್ತೀಚಿನ ಕೋವಿಡ್-19 ಪಿಡುಗು ಹರಡುವಿಕೆಯಿಂದ Immunization, Nutrition ಮತ್ತು Health ಯೋಜನೆಗಳ ಅನುಷ್ಠಾನ ನೆನೆಗುದಿಗೆ ಬಿದ್ದು, ತಾಯಿ-ಮಗು ಹಾರೈಕೆ ಕ್ರಮಗಳಿಗೆ ಹಿನ್ನಡೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕಾರ್ಯಕ್ರಮಗಳನ್ನು ಸಕಾಲಿಕವಾಗಿ ಜಾರಿಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು? (ವಿವರ ನೀಡುವುದು.) | • ಪ್ರಸ್ತುತ ಕೋವಿಡ್-19 ಸಾಂಕ್ರಾಮಿಕದ ಹಿನ್ನೆಲೆಯಲ್ಲಿ ಅಂಗನವಾಡಿ ಕೇಂದ್ರಗಳು ಮುಚ್ಚಿರುವುದರಿಂದ ಅಂಗನವಾಡಿಯ ಎಲ್ಲಾ ಫಲಾನುಭವಿಗಳಿಗೆ ಅವರ ಮನೆ ಬಾಗಿಲಿಗೆ ಪೂರಕ ಪೌಷ್ಟಿಕ ಆಹಾರ ಪದಾರ್ಥಗಳನ್ನು ವಿತರಿಸಲಾಗುತ್ತಿದೆ. ಅಂಗನವಾಡಿ ಕೇಂದ್ರಗಳಲ್ಲಿ ನಿಯಮಿತವಾಗಿ ಮಕ್ಕಳ ಚುಚ್ಚುಮದ್ದು / ಆರೋಗ್ಯ ತಪಾಸಣೆಯನ್ನು ಮಾಡಲಾಗುತ್ತಿದ್ದು, ತೂಕವನ್ನು ಅಳತೆ ಮಾಡಲಾಗುತ್ತಿದೆ. |

(ಶಶಿಕಲಾ ಅಣ್ಣಾಸಾಹೇಬ್ ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ,
ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು.

ಸಂಖ್ಯೆ :ಮಮಇ 12 ಮಮಅ 2021

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ.ಎ.ತಿಪ್ಪೇಸ್ವಾಮಿ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ

ಸಂಖ್ಯೆ: 27 ಕ್ಕೆ ಅನುಬಂಧ

(ರೂ. ಲಕ್ಷಗಳಲ್ಲಿ)

| ಕ್ರ.ಸಂ | ಯೋಜನೆಗಳು | 2017-18 | | 2018-19 | | 2019-20 | |
|---|---|---|---|---|---|---|---|
| | | ಒದಗಿಸಿರುವ ಅನುದಾನ | ಆರ್ಥಿಕ ವೆಚ್ಚ | ಒದಗಿಸಿರುವ ಅನುದಾನ | ಆರ್ಥಿಕ ವೆಚ್ಚ | ಒದಗಿಸಿರುವ ಅನುದಾನ | ಫಲಾನುಭವಿಗಳ ಸಂಖ್ಯೆ |
| 1 | ಶಾಲಾಪೂರ್ವ ಮಕ್ಕಳ ಊಟದ ಯೋಜನೆ (ಕೇಂದ್ರ 50% - ರಾಜ್ಯ 50%) ಮಾತೃಪೂರ್ಣ, ಕ್ಷೀರ ಭಾಗ್ಯ & | 14355.00 | 142029.59 | 215042.00 | 156487.68 | 215042.00 | 147736.28 |
| 2 | ಅಪೌಷ್ಠಿಕ ಮಕ್ಕಳ ವೈದ್ಯಕೀಯ ವೆಚ್ಚವನ್ನು ಭರಿಸುವ ಯೋಜನೆ (ಬಾಲಸಂಜೀವಿನಿ) | 500.00 | 335.15 | 200.00 | 166.94 | 200.00 | 163.20 |
| 3 | ಪ್ರಾಯ ಪೂರ್ವ ಬಾಲಕಿಯರ ಸಬಲೀಕರಣಕ್ಕಾಗಿ ರಾಜೀವ್ ಗಾಂಧಿ ಯೋಜನೆ (ಸಬಲ) (ಕೇಂದ್ರ 50% - ರಾಜ್ಯ 50%) | 423.00 | 109.73 | 423.00 | 12.66 | 200.00 | 75.27 |
| 4 | ಇಂದಿರಾಗಾಂಧಿ ಮಾತೃತ್ವ ಸಹಯೋಗ ಯೋಜನೆ (ಕೇಂದ್ರ 60% - ರಾಜ್ಯ 40%) | 1158.00 | 7917.57 | 0.00 | 0.00 | 0.00 | 0.00 |
| 5 | ದುಡಿಯುವ ಮಹಿಳೆಯರ ಮಕ್ಕಳಿಗೆ ಶಿಶುಪಾಲನಾ ಕೇಂದ್ರ (ಕೇಂದ್ರ 60% - ರಾಜ್ಯ 40%- | 535.69 | 468.33 | 914.00 | 0.00 | 1105.98 | 962.99 |
| 6 | ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆ (ಕೇಂದ್ರ 60% - ರಾಜ್ಯ 40%) | 0.00 | 0.00 | 10000.00 | 7228.17 | 5710.00 | 22982.74 |
| 7 | ಪೋಷಣ್ ಅಭಿಯಾನ ಯೋಜನೆ (ಕೇಂದ್ರ 60% - ರಾಜ್ಯ 40%) | 0.00 | 0.00 | 8757.58 | 8757.58 | 12972.15 | 6575.69 |
| | ಒಟ್ಟು | **16971.69** | **150860.37** | **235336.58** | **172653.03** | **235230.13** | **178496.17** |